1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂಃ568/2024**

ಪಿರ್ಯಾದಿ : ಕವಲಂದೆ ಪೊಲೀಸರು

ವಿರುದ್ಧ

ಆರೋಪಿ : 1 ಗುರುಸ್ವಾಮಿ ಬಿನ್ ಬಸಪ್ಪ ದೇವರು 57 ವರ್ಷ

2 ಶಾಂತಮಲ್ಲೇಶ ಡಿ ಜಿ ಬಿನ್ ಗುರುಸ್ವಾಮಿ 29 ವರ್ಷ

3 ಸದಾಶಿವಮೂರ್ತಿ ಬಿನ್ ಲೇಟ್ ಸಿದ್ದಪ್ಪ 52 ವರ್ಷ

ಎಲ್ಲರ ವಾಸಃ ದೇವನೂರು ಗ್ರಾಮ, ನಂಜನಗೂಡು ತಾ.

## ದೋಷಾರೋಪಣೆ

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ಕವಲಂದೆ ಪೊಲೀಸ್ ಠಾಣಾ ಸರಹದ್ದು ನಂಜನಗೂಡು ತಾಲೂಕು ದೇವನೂರು ಗ್ರಾಮದಲ್ಲಿ ಚಾಸಾ.1 ರವರ ಮನೆಯ ಮುಂಭಾಗವಿರುವ ಸಾರ್ವಜನಿಕ ರಸ್ತೆಯ ಹತ್ತಿರ ಆರೋಪಿತರು ಘನ ನ್ಯಾಯಾಲಯದಲ್ಲಿ ಸುಮಾರು ವರ್ಷಗಳಿಂದ ನಡೆಯುತ್ತಿರುವ ಜಾಗದ ವಿಚಾರವಾಗಿ ದ್ವೇಷವನ್ನು ಇಟ್ಟುಕೊಂಡು ದಿನಾಂಕ:23.11.2023 ರಂದು ಸಂಜೆ 06.45 ಗಂಟೆ ಸಮಯದಲ್ಲಿ ಆರೋಪಿತರೆಲ್ಲರೂ ಸೇರಿ ಚಾಸಾ.1 ರವರ ಜೊತೆ ತೀಟೆ ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಬೈದು ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಶಾಂತಿ ಭಂಗ ಮಾಡಲಿ ಅಥವಾ ಇತರೆ ಯಾವುದೇ ಅಪರಾಧ ಮಾಡಲಿ ಎನ್ನುವ ಉದ್ದೇಶದಿಂದ ಅವರನ್ನು ಅವಮಾನಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.504 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 1ನೇ ಆರೋಪಿತರಾದ ನೀವು ಯಾವ ರೀತಿ ಜಾಗವನ್ನು ನೀವು ದಕ್ಕಿಸಿ ಕೊಳ್ಳುತ್ತೀರಿ ನಾವು ನೋಡಿಕೊಳ್ಳುತ್ತೇವೆಂದು ಮಚ್ಚಿನಿಂದ ಚಾಸಾ.1 ರವರ ತಲೆಯ ಮೇಲ್ಭಾಗಕ್ಕೆ ಎರಡು ಬಾರಿ ಹೊಡೆದು ತೀವ್ರ ಸ್ವರೂಪದ ಗಾಯಪಡಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.326 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 2ನೇ ಆರೋಪಿತರಾದ ತಡೆಯಲು ಬಂದ ಚಾಸಾ.2 ರವರನ್ನು ತಬ್ಬಿ ಹಿಡಿದುಕೊಂಡು ಮುಂದೆ ಹೋಗದಂತೆ ತಡೆದು ಅಕ್ರಮ ತಡೆಯನ್ನುಂಟು ಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 341 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 1ನೇ ಆರೋಪಿತರಾದ ನೀವು ಚಾಸಾ.2 ರವರ ನೆತ್ತಿ ತಲೆಗೆ ಹೊಡೆದು ರಕ್ತಗಾಯ ಪಡಿಸಿದ್ದು, 3ನೇ ಆರೋಪಿತರಾದ ನೀವು ಎರಡು ಮಂಡಿ ಚಿಪ್ಪಿಗೆ ದೊಣ್ಣೆಯಿಂದ ಹೊಡೆದಿರುತ್ತೀರಿ ,2ನೇ ಆರೋಪಿತರಾದ ನೀವು ಬ್ಯಾಟಿನಿಂದ ಚಾಸಾ.1ರವರ ಮೈ ಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ. ಆದ್ದರಿಂದ

ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.324 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಐದನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 3 ನೇ ಆರೋಪಿತರಾದ ನೀವು ಚಾಸಾ.2 ರವರಿಗೆ ಕಾಲಿನಿಂದ ಒದ್ದು ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.323 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 3 ನೇ ಆರೋಪಿತರಾದ ನೀವು ಬೋಳಿ ಮಕ್ಕಳಾ ಇವತ್ತು ಬಚಾವ್ ಆಗಿದ್ದೀರಿ ನಿಮ್ಮನ್ನು ಕೊಲೆ ಮಾಡುತ್ತೇವೆಂದು ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಎಸಗಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.506 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 16.12.2025 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.<br>
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂಃ568/2024**

ಪಿರ್ಯಾದಿ : ಕವಲಂದೆ ಪೊಲೀಸರು

ವಿರುದ್ಧ

ಆರೋಪಿ : 1 ಗುರುಸ್ವಾಮಿ ಬಿನ್ ಬಸಪ್ಪ ದೇವರು 57 ವರ್ಷ

2 ಶಾಂತಮಲ್ಲೇಶ ಡಿ ಜಿ ಬಿನ್ ಗುರುಸ್ವಾಮಿ 29 ವರ್ಷ

3 ಸದಾಶಿವಮೂರ್ತಿ ಬಿನ್ ಲೇಟ್ ಸಿದ್ದಪ್ಪ 52 ವರ್ಷ

ಎಲ್ಲರ ವಾಸಃ ದೇವನೂರು ಗ್ರಾಮ, ನಂಜನಗೂಡು ತಾ.

: ಆಪಾದನೆ :

ಪ್ರಶ್ನೆ:1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ

ಪ್ರಶ್ನೆ:2– ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**